**ಮಾನ್ಯ ವಿಧಾನ ಪರಿಷತ್ತು ಸದಸ್ಯರಾದ ಶ್ರೀ ಶಶೀಲ್ ಜಿ ನಮೋಶಿ ಇವರು ಶೂನ್ಯ ವೇಳೆಯಲ್ಲಿ ಸಾರ್ವಜನಿಕ ಮಹತ್ವದ ವಿಷಯವನ್ನು ಪ್ರಸ್ತಾಪಿಸಿರುವ ವಿಷಯಕ್ಕೆ ಉತ್ತರ**

**ವಿಷಯ:**

ದಿನಾಂಕ:11.07.2023ರ ಉದಯವಾಣಿ ದಿನ ಪತ್ರಿಕೆಯಲ್ಲಿ "ಶಾಶ್ವತ ನೆಲೆ ಕಾಣದ ಶ್ರೀ ನಾರಾಯಣ ಗುರು ವಸತಿ ಶಾಲೆ" ಎಂಬ ಶೀರ್ಷಿಕೆಯಡಿ ಪ್ರಕಟವಾದ ಸುದ್ದಿಯನ್ವಯ ಕಳೆದ ವರ್ಷದಲ್ಲಿ ರಾಜ್ಯ ಸರ್ಕಾರ ಉಡುಪಿ, ದಕ್ಷಿಣ ಕನ್ನಡ, ಉತ್ತರ ಕನ್ನಡ ಮತ್ತು ಶಿವಮೊಗ್ಗ ಜಿಲ್ಲೆಯಲ್ಲಿ ತಲಾ ಒಂದರಂತೆ 4 ಕಡೆಗಳಲ್ಲಿ ಆರಂಭಿಸಿರುವ ಶ್ರೀ ನಾರಾಯಣ ಗುರು ವಸತಿ ಶಾಲೆಗಳಿಗೆ ಕಳೆದ ಬಜೆಟ್‌ನಲ್ಲಿ ಪ್ರತಿ ಶಾಲೆಗೆ ರೂ.18.00 ಕೋಟಿ ಅನುದಾನ ಘೋಷಿಸಿತ್ತು. ಇಲ್ಲಿ 6 ರಿಂದ 10 ನೇ ತರಗತಿಯವರೆಗೆ ಶಿಕ್ಷಣ ನೀಡಲಾಗುತ್ತಿದೆ. ಆದರೆ ಇವುಗಳಿಗೆ ಇನ್ನೂ ಶಾಶ್ವತ ನೆಲೆ ಕಲ್ಪಿಸಲಾಗಿಲ್ಲ ಎಂಬುದು ವಿಷಾದನೀಯ ಸಂಗತಿ, ಎರಡು ಕಡೆ ಬಾಡಿಗೆ ಕಟ್ಟಡದಲ್ಲಿ ಇನ್ನೆರಡೂ ಕಡೆ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳಲ್ಲಿ ನಡೆಯುತ್ತಿದೆ. ಅಲ್ಲಿ ಮಕ್ಕಳ ಸಂಖ್ಯೆ ಹೆಚ್ಚುತ್ತಿರುವುದರಿಂದ ಸೂಕ್ತ ಸೌಕರ್ಯ ಕಲ್ಪಿಸುವುದು ಬಹುದೊಡ್ಡ ಸವಾಲಾಗಿದೆ.

ಕಳೆದ ವರ್ಷದಲ್ಲೇ ಈ ಶಾಲೆಗಳ ನಿರ್ಮಾಣಕ್ಕಾಗಿ ಅನುದಾನ ಬಿಡುಗಡೆಯಾಗಿದ್ದರೂ ಕೂಡ ಇಲ್ಲಿಯವರೆಗೆ ಶಾಲಾ ಕಟ್ಟಡ ನಿರ್ಮಾಣಕ್ಕೆ ಜಾಗ ಖರೀದಿ ಮಾಡಿ ಕಾಮಗಾರಿ ಪ್ರಾರಂಭಿಸಲು ಸಾಧ್ಯವಾಗಿಲ್ಲ. ಅದಲ್ಲದೇ ಶಾಲೆಗಳಿಗೆ ಕಳೆದ ವರ್ಷ ಮಕ್ಕಳ ಸಂಖ್ಯೆ ಕಡಿಮೆಯಿದ್ದುದರಿಂದ ಅಂತಹ ಸಮಸ್ಯೆಯಾಗಿಲ್ಲ. ಈ ಬಾರಿ ಮೊರಾರ್ಜಿ ಶಾಲೆಗಳ ಮಕ್ಕಳ ಸಂಖ್ಯೆ ಹಾಗೂ ನಾರಾಯಣ ಗುರು ಶಾಲೆಗಳ ಮಕ್ಕಳ ಸಂಖ್ಯೆ ಎರಡೂ ಹೆಚ್ಚಳ ಆಗಿದೆ. ಇದರಿಂದಾಗಿ ಮಕ್ಕಳಿಗೆ ಉಳಿದುಕೊಳ್ಳಲು ಹಾಗೂ ಪಾಠ-ಪ್ರವಚನಕ್ಕೆ ಕೋಣೆಗಳ ಕೊರತೆಯಾಗಲಿದೆ. ಇವಿಷ್ಟೇ ಅಲ್ಲದೆ ಎಲ್ಲ 4 ಕಡೆಗಳಲ್ಲೂ ನಾರಾಯಣ ಗುರು ಶಾಲೆಗೆಂದು ಪ್ರತ್ಯೇಕ ಶಿಕ್ಷಕರನ್ನಾಗಲಿ, ಹಾಸ್ಟೆಲ್ ವಾರ್ಡನ್, ಸಿಬ್ಬಂದಿಯನ್ನಾಗಲಿ ನೇಮಿಸಿಲ್ಲ, ಅತಿಥಿ ಶಿಕ್ಷಕರು ಪಾಠ ಮಾಡುತ್ತಿದ್ದಾರೆ.

ಆದ್ದರಿಂದ, ಸರ್ಕಾರವು ಆದಷ್ಟು ತ್ವರಿತವಾಗಿ ಶಾಲೆಗಳ ನಿರ್ಮಾಣ ಕಾರ್ಯ ಮತ್ತು ಸಿಬ್ಬಂದಿಗಳ ವ್ಯವಸ್ಥೆಯನ್ನು ಮಾಡಲು ಈ ಕೂಡಲೇ ಕ್ರಮವಹಿಸಲು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಕ್ತ ನಿರ್ದೇಶನ ನೀಡಬೇಕೆಂದು ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರಿಗೆ ಶೂನ್ಯವೇಳೆಯಲ್ಲಿ ಪ್ರಸ್ತಾಪಿಸಿರುವ ಬಗ್ಗೆ.

*******

**ಉತ್ತರ:**

ಮಾನವೀಯತೆ, ಸಮಾನತೆ ಹರಿಕಾರ ಶ್ರೀ ನಾರಾಯಣಗುರು ರವರ ಸ್ಮರಣಾರ್ಥ ಉಡುಪಿ, ದಕ್ಷಿಣ ಕನ್ನಡ, ಉತ್ತರ ಕನ್ನಡ ಮತ್ತು ಶಿವಮೊಗ್ಗ ಜಿಲ್ಲೆಗಳಲ್ಲಿ ಶ್ರೀ ನಾರಾಯಣ ಗುರು ವಸತಿ ಶಾಲೆಗಳನ್ನು ಪ್ರಾರಂಭಿಸಲು ಸರ್ಕಾರದ ಆದೇಶ ಸಂಖ್ಯೆ: ಹಿಂವಕ 231 ಬಿಎಂಎಸ್ 2022 ದಿನಾಂಕ: 04.05.2022 ರ ರಲ್ಲಿ ಪ್ರಾರಂಭಿಸಲು ಅನುಮೋದನೆ ನೀಡಿ ಆದೇಶಿಸಲಾಗಿರುತ್ತದೆ..

ಸರ್ಕಾರದ ಆದೇಶ ಸಂಖ್ಯೆ: ಹಿಂವಕ 231 ಬಿಎಂಎಸ್ 2022 ದಿನಾಂಕ: 22.08.2022 ರನ್ವಯ ಉಡುಪಿ, ದಕ್ಷಿಣ ಕನ್ನಡ, ಉತ್ತರ ಕನ್ನಡ ಮತ್ತು ಶಿವಮೊಗ್ಗ ಜಿಲ್ಲೆಗಳಲ್ಲಿ ತಲಾ ಒಂದರಂತೆ ಶ್ರೀ ನಾರಾಯಣ ಗುರು ವಸತಿ ಶಾಲೆಯನ್ನು ಪ್ರಾರಂಭಿಸಲು ಅಗತ್ಯವಿರುವ 36 ಬೋಧಕ/ಬೋಧಕೇತರ ಹುದ್ದೆಗಳನ್ನು ಸೃಜಿಸಿ ನೇರನೇಮಕಾತಿ/ನಿಯೋಜನೆ/ಹೊರಗುತ್ತಿಗೆ ಮೂಲಕ ಭರ್ತಿ ಮಾಡಿಕೊಳ್ಳಲು ಅನುಮೋದನೆ ನೀಡಿ ಆದೇಶಿಸಲಾಗಿದೆ.

ಅದರಂತೆ, ಪ್ರಸ್ತುತ ಸದರಿ ವಸತಿ ಶಾಲೆಗಳಿಗೆ ಪ್ರಾಂಶುಪಾಲರನ್ನು ನಿಯೋಜನೆ ಮೇರೆಗೆ ಸ್ಥಳ ನಿಯುಕ್ತಿಗೊಳಿಸಲಾಗಿರುತ್ತದೆ. ಉಳಿದಂತೆ ಬೋಧಕ/ಬೋಧಕೇತರ ಸಿಬ್ಬಂದಿಗಳನ್ನು ಅತಿಥಿ / ಹೊರಸಂಪನ್ಮೂಲ ಏಜೆನ್ಸಿ ಮೂಲಕ ಜಿಲ್ಲಾ ಹಂತದಲ್ಲಿ ಸೇವೆಯನ್ನು ಪಡೆಯಲಾಗುತ್ತಿದೆ. ಸದರಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮವಹಿಸಲಾಗುವುದು.

ಸರ್ಕಾರದ ಆದೇಶ ಸಂಖ್ಯೆ: ಹಿಂವಕ 231 ಬಿಎಂಎಸ್ 2022, ದಿನಾಂಕ: 27.01.2023 ರಲ್ಲಿ ಸದರಿ ವಸತಿ ಶಾಲೆಗಳಿಗೆ ಕಟ್ಟಡ ನಿರ್ಮಾಣ ಮಾಡಲು ತಲಾ ಒಂದು ವಸತಿ ಶಾಲೆಗೆ ರೂ.18.00ಕೋಟಿಗಳಿಗೆ ಆಡಳಿತಾತ್ಮಕ ಅನುಮೋದನೆ ನೀಡಿದ್ದು, ಪ್ರಸ್ತುತ ಟೆಂಡರ್ ಪ್ರಕ್ರಿಯೆ ಪೂರ್ಣಗೊಂಡಿದ್ದು, ಕಾರ್ಯಾದೇಶ ನೀಡುವ ಹಂತದಲ್ಲಿದೆ.

**ಸಂಖ್ಯೆ: ಹಿಂವಕ 351 ಬಿಎಂಎಸ್ 2023**

**(ಶಿವರಾಜ ಎಸ್ ತಂಗಡಗಿ)**
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಹಾಗೂ
ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರು